**ಬೆಳಗಾವಿ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಖಾಸಗಿ**

**ಮೆಡಿಕಲ್ ಕಾಲೇಜಿನವರಿಗೆ ನಡೆಸಲು ಅನುಮತಿ ನೀಡುವುದು**

3554 (3491) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಖಾಸಗಿ ಮೆಡಿಕಲ್ ಕಾಲೇಜಿನವರಿಗೆ ನಡೆಸಲು ಅವಕಾಶ ಮಾಡಿಕೊಡಲಾಗುವುದೆಂಬ ಸಂಗತಿ ನಿಜವೇ;

ಆ) ಹಾಗಿದ್ದಲ್ಲಿ, ಯಾವ ಯಾವ ಮೆಡಿಕಲ್ ಕಾಲೇಜುಗಳಿಗೆ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ನಡೆಸಲು ಕೊಡಬೇಕೆಂದು ನಿರ್ಣಯಿಸಲಾಗಿದೆ;

ಇ) ಬೆಳಗಾವಿ ಜಿಲ್ಲೆಯಲ್ಲಿ ಯಾವ ಯಾವ ಸ್ಥಳಗಳಲ್ಲಿರುವ ಎಷ್ಟು ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಖಾಸಗಿ ಮೆಡಿಕಲ್ ಕಾಲೇಜಿನವರಿಗೆ ನಡೆಸಲು ಕೊಡಬೇಕೆಂದು ನಿರ್ಣಯಿಸಲಾಗಿದೆ;

ಈ) ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿರುವ ಹೆರಿಗೆ ಆಸ್ಪತ್ರೆಯನ್ನು ಖಾಸಗಿ ಮೆಡಿಕಲ್ ಕಾಲೇಜಿನವರು ನಡೆಸಲು ಅನುಮತಿ ನೀಡಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು

ಆ)

| | | |
|---|---|---|
| 1. | ಆದಿಚುಂಚನಗಿರಿ ವೈದ್ಯಕೀಯ ಮಹಾವಿದ್ಯಾಲಯ ಮಂಡ್ಯ ಜಿಲ್ಲೆ | 1 ಪ್ರಾಆಕೇ |
| 2. | ವೈದೇಹಿ ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ಬೆಂಗಳೂರು | 1 ಪ್ರಾಆಕೇ |
| 3. | ಜಗದ್ಗುರು ಶ್ರೀ ಶಿವರಾತ್ರೀಶ್ವರ ವೈದ್ಯಕೀಯ ಮಹಾವಿದ್ಯಾಲಯ ಮೈಸೂರು | 2 ಪ್ರಾಆಕೇ |
| 4. | ಖಾಜಾ ಬಂದಾ ನವಾಜ್ ವೈದ್ಯಕೀಯ ಮಹಾವಿದ್ಯಾಲಯ, ಗುಲ್ಬರ್ಗ | 1 ಪ್ರಾಆಕೇ |
| 5. | ಸಿದ್ಧಾರ್ಥ ವೈದ್ಯಕೀಯ ಮಹಾವಿದ್ಯಾಲಯ, ತುಮಕೂರು | 3 ಪ್ರಾಆಕೇ |
| 6. | ರಾಮಯ್ಯ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು | 1 ಪ್ರಾಆಕೇ |
| 7. | ಫಾದರ್ ಮುಲ್ಲರ್ ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು | 3 ಪ್ರಾಆಕೇ |
| 8. | ಕೆ.ಎಸ್.ಹೆಗ್ಗಡೆ, ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು | 1 ಪ್ರಾಆಕೇ |

ಇ) ಯಾವ ಕಾಲೇಜಿನಿಂದಲೂ ಈ ಬಗ್ಗೆ ಪ್ರಸ್ತಾವನೆ ಬಂದಿರುವುದಿಲ್ಲ.

ಈ) ಇನ್ನೂ ಯಾವ ಕಾಲೇಜಿನಿಂದಲೂ ಈ ಬಗ್ಗೆ ಪ್ರಸ್ತಾವನೆ ಬಂದಿರುವುದಿಲ್ಲ.

**ರಾಜ್ಯದಲ್ಲಿ ಹೊಸ ಆಯುರ್ವೇದಿಕ್ ಆಸ್ಪತ್ರೆಗಳನ್ನು ತೆರೆಯುವುದು**

3555 (3492) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಹೊಸ ಆಯುರ್ವೇದಿಕ್ ಆಸ್ಪತ್ರೆಗಳನ್ನು ತೆರೆಯಬೇಕೆಂದು ಉದ್ದೇಶಿಸಲಾಗಿದೆ;